**JANUARY 22,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ನಿಜಶರಣ ಅಂಬಿಗರ ಚೌಡಯ್ಯನವರ** ವಿಮರ್ಶಾತ್ಮಕ ವಚನಗಳು ಇಂದಿಗೂ ಸಕಾಲಿಕವಾಗಿವೆ. ಅವರು ಕನ್ನಡದ ಸಾಹಿತ್ಯ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ವಿಜಯನಗರ ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣಪ್ಪ ಹೇಳಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾದ, ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಶರಣರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು. ಕಲಬುರಗಿಯಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ನಗರದ ಟೌನ್ ಹಾಲ್ ಆವರಣದಲ್ಲಿ ಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಸ್ಥಾಪನೆ ನಿಟ್ಟನಲ್ಲಿ ಶಂಕುಸ್ಥಾಪನೆ ನೆರವೇರಿಸಲಾಗಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ ಎಂದರು.

<><><>

**ಹಾವೇರಿ ತಾಲ್ಲೂಕು,** ದೇವಿಹೊಸೂರಿನಲ್ಲಿರುವ ದಾನವೀರ ಸಿರಸಂಗಿ ಶ್ರೀ ಲಿಂಗರಾಜ ದೇಸಾಯಿ ತೋಟಗಾರಿಕಾ ಅಭಿಯಾಂತ್ರಿಕ ಮತ್ತು ಆಹಾರ ತಂತ್ರಜ್ಞಾನ ಮಹಾವಿದ್ಯಾಲಯದಲ್ಲಿ, ಇಂದಿನಿಂದ 24ರ ವರೆಗೆ ಆಹಾರ ಮತ್ತು ತಂತ್ರಜ್ಞಾನ ವಿಷಯದ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ತೋಟಗಾರಿಕಾ ಅಭಿಯಾಂತ್ರಿಕ ಮತ್ತು ಆಹಾರ ತಂತ್ರಜ್ಞಾನ ಮಹಾವಿದ್ಯಾಲಯದ ನಿರ್ದೇಶಕ ಡಾಕ್ಟರ ಬಿ.ಫಕ್ರುದ್ದೀನ ಅವರು...

<><><>

**ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ** ಹಾಗೂ ರಾಯಚೂರು ಜಿಲ್ಲೆಯ ಸಿಂಧನೂರಿನಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಒಟ್ಟು 14 ಜನ ಮೃತಪಟ್ಟಿದ್ದಾರೆ. ಯಲ್ಲಾಪುರ ತಾಲೂಕಿನ ಅರಬೈಲ್ ಘಟ್ಟದ ಬಳಿ ತರಕಾರಿ ಹೇರಿದ್ದ ಲಾರಿಯು ಬೆಳಗಿನ ಜಾವ, ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಪಲ್ಟಿಯಾಗಿ ಬಾಗಲಕೋಟೆ, ಹಾವೇರಿ ಮೂಲದ 9 ಜನ

ಮೃತಪಟ್ಟಿದ್ದು, ಗಂಭೀರ ಗಾಯಗೊಂಡ 8 ಜನರನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆ ಹಾಗೂ ಯಲ್ಲಾಪುರದ ತಾಲೂಕು ಆಸ್ಪತ್ರೆಗಳಲ್ಲಿ ದಾಖಲಿಸಲಾಗಿದೆ. ಸಿಂಧನೂರು ಮಂತ್ರಾಲಯದ ಸಂಸ್ಕೃತ ವಿದ್ಯಾಪೀಠದ ಕ್ರೂಸರ್ ವಾಹನವು ಅರಗಿನಮರ ಕ್ಯಾಂಪ್ ಬಳಿ ಟೈರ್ ಬ್ಲಾಸ್ಟ್ ಆದ ಹಿನ್ನಲೆಯಲ್ಲಿ ಪಲ್ಟಿ ಹೊಡೆದ ಪರಿಣಾಮ ನಾಲ್ವರು ಮೃತಪಟ್ಟಿದ್ದಾರೆ. ಮಂಡ್ಯ ಜಿಲ್ಲೆ ಕೆ.ಆರ್ ಪೇಟೆ ತಾಲೂಕಿನಲ್ಲಿ ಗೂಡ್ಸ್ ವಾಹನ ಮಗುಚಿ ಓರ್ವ ಮಹಿಳೆ ಮೃತಪಟ್ಟಿದ್ದಾರೆ. ಗಂಭೀರ ಗಾಯಗೊಂಡ 14 ಜನರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಮೃತಪಟ್ಟವರ ಬಗ್ಗೆ ಸಂತಾಪ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮೃತರ ಆತ್ಮಗಳಿಗೆ ಶಾಂತಿ ಕೋರುತ್ತೇನೆ. ಮೃತರ ಕುಟುಂಬಗಳಿಗೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಲಾಗುವುದು ಎಂದು ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯ ಮೂಲಕ ತಿಳಿಸಿದ್ದಾರೆ.

<><><>

**ಮೆದುಳು ಆರೋಗ್ಯಕ್ಕೆ ಸಂಬಂಧಿಸಿದ** ಕಾಯಿಲೆಗಳಿಗೆ ಬಳ್ಳಾರಿ ನಗರದ ಜಿಲ್ಲಾ ಆಸ್ಪತ್ರೆಯಲ್ಲಿ, ತಜ್ಞರಿಂದ ಚಿಕಿತ್ಸಾ ಸೌಲಭ್ಯ ಆರಂಭಗೊಂಡಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾಕ್ಟರ ಯಲ್ಲಾ ರಮೇಶ್ ಬಾಬು ಅವರು ಹೇಳಿದರು. ಪಾರ್ಶ್ವವಾಯು, ಅಪಸ್ಮಾರ, ಮರೆವು ಕಾಯಿಲೆ ಮತ್ತು ತಲೆನೋವು ಸೇರಿದಂತೆ ನರ ವೈಜ್ಞಾನಿಕ ಕಾಯಿಲೆಗಳಿಂದ ಬಳಲುತ್ತಿರುವವರು ತಜ್ಞರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬಹುದು ಎಂದರು.

<><><>

**ಇತ್ತೀಚೆಗೆ ಮುಕ್ತಾಯಗೊಂಡ,** ಪುರು ´ರ ಹಾಗೂ ಮಹಿಳೆಯರ ಖೋಖೋ ವಿಶ್ವಕಪ್– 2025 ರಲ್ಲಿ, ಅತ್ಯುತ್ತಮ ಆಟವಾಡಿ, ಭಾರತ ತಂಡವು ವಿಶ್ವ ಚಾಂಪಿಯನ್ ಆಗಿ ಹೊರಹೊಮ್ಮುವಲ್ಲಿ, ಪ್ರಮುಖ ಪಾತ್ರ ವಹಿಸಿದ ಕರ್ನಾಟಕದ ಎಂ.ಕೆ.ಗೌತಮ್ ಹಾಗೂ ಚೈತ್ರಾ ಅವರನ್ನು ಕೇಂದ್ರ ಬೃಹತ್ ಕೈಗಾರಿಕಾ ಖಾತೆ ಸಚಿವರಾದ ಹೆಚ್.ಡಿ ಕುಮಾರಸ್ವಾಮಿ ಅವರು ನವದೆಹಲಿಯ ತಮ್ಮ ಸಚಿವಾಲಯದಲ್ಲಿ ಸನ್ಮಾನಿಸಿ, ಗೌರವಿಸಿದರು.

<><><>

**ಭಾರತ ಚುನಾವಣಾ ಆಯೋಗವು** 2024–25 ನೇ ಸಾಲಿನ ಅತ್ಯುತ್ತಮ ಚುನಾವಣಾ ಪದ್ಧತಿ ಅಳವಡಿಸಿಕೊಂಡು ಜ್ಯಾರಿಗೆ ತಂದ ಅಧಿಕಾರಿಗಳು ಹಾಗೂ ಸಂಸ್ಥೆಗಳಿಗೆ ಪ್ರಶಸ್ತಿ ಘೋಷಿಸಿದೆ. ಕಲಬುರಗಿ ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಜನೆವರಿ 25 ರಂದು, ನವದೆಹಲಿಯ ಮಾಣೆಕ್ ಶಾ ಕೇಂದ್ರದಲ್ಲಿ ನಡೆಯುವ ರಾಷ್ಟ್ರೀಯ ಮತದಾರರ ದಿನಾಚರಣೆಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>